ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

24

ಇಲಾಖೆ / ವಿಷಯ : DEPARTMENT / SUBJECT: ಬಿಬಿಎಂಪಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE: 12/1/2021

# ಬಿಬಿಎಂಪಿ ಕಾಯ್ದೆ- ಗೊಂದಲ ನಿವಾರಣೆಗೆ ಕ್ರಮ

ಪ್ರ. ವಾ. 12-1-2021

ವರದಿ ಪರಿಣಾಮ

ಬೆಂಗಳೂರು: ಬಿಬಿಎಂಪಿ ಕಾಯ್ದೆ 2020ರ ಅನುಷ್ಠಾನ ಹಾಗೂ ಕರ್ನಾಟಕ ಮುನ್ಸಿಪಲ್ ಕಾಯ್ದೆ 1976ರಡಿ ರೂಪಿಸಲಾದ ಬೈಲಾಗಳ ಮುಂದುವರಿಕೆ ಸಂಬಂಧ ಎದುರಾಗಿರುವ ಗೊಂದಲಗಳ ನಿವಾರಣೆಗೆ ಸರ್ಕಾರ ಕ್ರಮ ಕೈಗೊಂಡಿದೆ.

ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಾಕೇಶ್ ಸಿಂಗ್ ಅವರು ಈ ಕುರಿತು ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ಅವರಿಗೆ ಸೋಮವಾರ ಪತ್ರ ಬರೆದಿದ್ದಾರೆ. ಬಿಬಿಎಂಪಿ ಕಾಯ್ದೆಯು ಸೋಮವಾರದಿಂದ ಜಾರಿಗೆ ಬಂದಿದೆ. ಈ ಕಾಯ್ದೆ ಜಾರಿಗೆ ಅಗತ್ಯವಿರುವ ನಿಯಮಗಳು, ಬೈಲಾಗಳು, ಬಿಬಿಎಂಪಿ ಹುದ್ದೆಗಳ ಪುನರ್ ನಾಮಕರಣ ಹಾಗೂ ವಲಯಗಳ ಪುನರ್ವಿಂಗಡಣೆ ಕುರಿತು ಪ್ರಸ್ತಾವನೆ ಸಲ್ಲಿಸುವಂತೆ ಬಿಬಿಎಂಪಿ ಆಯುಕ್ತರಿಗೆ ಸೂಚಿಸಿದ್ದಾರೆ.

ಬಿಬಿಎಂಪಿ ಕಾಯ್ದೆ ಅನುಷ್ಠಾನದ ವೇಳೆ ಎದುರಾಗಿರುವ ಗೊಂದಲಗಳ ಬಗ್ಗೆ 'ಪ್ರಜಾವಾಣಿ'ಯು ಸೋಮವಾರದ ಸಂಚಿಕೆಯಲ್ಲಿ ಮುಖಪುಟದಲ್ಲಿ ವಿಶೇಷ ವರದಿಯನ್ನು ಪ್ರಕಟಿಸಿತ್ತು.